**<u>ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಃ ನ್ಯಾಯಾಲಯಃ ನರಸಿಂಹರಾಜಪುರ</u>**

**<u>ಸಿಸಿಃನಂಃ 641/2024</u>**

**ಸಿ.ಡಬ್ಲ್ಯೂಃ 5**

**ಪಿ.ಡಬ್ಲೂಃ 2**

**ಸಾಕ್ಷಿದಾರರ ಹೆಸರು ಃ ಅಶೋಕ್**

**ತಂದೆಯ ಹೆಸರು ಃ ಚನ್ನಪ್ಪ ಗೌಡ**

**ವಯಸ್ಸು ಃ 50 ವರ್ಷ**

**ಉದ್ಯೋಗ ಃ ವ್ಯವಸಾಯ**

**ವಾಸಸ್ಥಳ ಃ ಕಾನೂರು**

**ದಿನಾಂಕಃ 15.12.2025 ರಂದು ಪ್ರಮಾಣವಚನ ಬೋಧಿಸಲಾಯಿತು.**

**<u>ಃಃ ಮುಖ್ಯ ವಿಚಾರಣೆಃ ಮಾನ್ಯಃ ಎಪಿಪಿಯವರಿಂದಃ</u>**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಬಿ ಹೆಚ್ ಕೈಮರದ ಬಳಿ ಒಂದು ವರ್ಷದ ಹಿಂದೆ ನ ರಾ ಪುರ ಬಸ್ ಸ್ಟಾಂಡ್ ಕಡೆ ಬರುವಾಗ್ಗೆ ಪೊಲೀಸರು ನನ್ನನ್ನು ಕರೆದು ಒಂದು ದಾಖಲೆಗೆ ಸಹಿ ಮಾಡುವಂತೆ ಹೇಳಿದರು ಅದರಂತೆ ನಾನು ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ನನಗೆ ಸದರಿ ದಾಖಲೆಯಲ್ಲಿ ಏನು ಬರೆದಿದ್ದಾರೆಂದು ತಿಳಿದಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲೆ ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಈಗಾಗಲೇ ನಿಪಿ-9 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-9(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಭಾವಚಿತ್ರವನ್ನು ತೋರಿಸಲಾಗಿ ಸಾಕ್ಷಿಯು ಸದರಿ ಭಾವಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು. ಸಾಕ್ಷಿ ಮುಂದುವರೆದು ಸದರಿ ಭಾವಚಿತ್ರವನ್ನು ಯಾವ ಕಾರಣಕ್ಕಾಗಿ ತೆಗೆದುಕೊಂಡರು ಎಂದು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**ಃಃಪಾಟೀ ಸವಾಲುಃ ಮಾನ್ಯ ಎಪಿಪಿಯವರಿಂದಃಃ**

ದಿನಾಂಕಃ 06.08.2024 ರಂದು ನ ರಾ ಪುರದ ತಾಲ್ಲೂಕು ಬಿ ಹೆಚ್ ಕೈಮರದ ಅರಳೀಕೊಪ್ಪದ ವಾಸಿ ಚಾಸಾ-1 ರವರ ಸರ್ವೆ ನಂಃ 49/1 ರಲ್ಲಿ ನನ್ನನ್ನು ಮತ್ತು ಚಾಸಾ-4 ರವರನ್ನು ಪೊಲೀಸರು ಪಂಚ ಸಾಕ್ಷಿದಾರರಾಗಿ ಸಹಕರಿಸಲು ಕೋರಿದ್ದು, ನೋಟೀಸು ನೀಡಿದರು ಎಂದರೆ ಸರಿಯಲ್ಲ. ನಮ್ಮ ಸಮಕ್ಷಮ ಚಾಸಾ-1 ರವರು ತೋರಿಸಿದಂತೆ ಕೃತ್ಯ ನಡೆದ ಸ್ಥಳವನ್ನು ಅದೇ ದಿನ ಸಂಜೆ 5.30 ರಿಂದ 6.00 ಗಂಟೆಯವರೆಗೆ ಸ್ಥಳ ಮತ್ತು ಅಮಾನತು ಮಹಜರನ್ನು ಸ್ಥಳದಲ್ಲಿಯೇ ನಿಪಿ-9 ರಂತೆ ಬರೆದುಕೊಂಡರು ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-11 ರಂತೆ ಫೋಟೋ ತೆಗೆದರು ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಃಪಾಟೀ ಸವಾಲು ಆರೋಪಿ ಪರ ಶ್ರೀ. ಎಂ ಸಿ ಮತ್ತು ಹೆಚ್ ಎಂ ಬಿ ವಕೀಲರಿಂದಃಃಇಲ್ಲಾಃಃ**

**ಃಃ ಮರು ವಿಚಾರಣೆ ಇಲ್ಲಃಃ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ**

**ಪ್ರ.ದ.ನ್ಯಾದಂಃ ನ.ರಾ.ಪುರ.**

**ಸಾಕ್ಷಿ ಸಹಿಃ**